# ಮೈಸೂರು ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ;
# ಸಿದ್ಧಾರ್ಥನಗರ, ಮಲೆಮಹದೇಶ್ವರ ರಸ್ತೆ, ಮೈಸೂರು – 570 011

**ದೂರವಾಣಿ ಸಂಖ್ಯೆ:0821–2473923, 2473933, 2473645**

ಸಂಖ್ಯೆ:1012:ಆಡಳಿತ:2019 ದಿನಾಂಕ 07.09.2019

## ಸಂಕ್ಷಿಪ್ತ ಬ್ಯಾಕ್‌ಲಾಗ್ ನೇಮಕಾತಿ ಪ್ರಕಟಣೆ

ಮೈಸೂರು ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟವು ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿ ಗ್ರಾಮೀಣ ಪ್ರದೇಶಗಳಿಂದ ಹಾಲನ್ನು ಸಂಗ್ರಹಿಸಿ, ಸಂಸ್ಕರಿಸಿ, ವಿವಿಧ ಉತ್ಪನ್ನಗಳ ತಯಾರಿಕೆ ಮಾಡಿ 'ನಂದಿನಿ' ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಗ್ರಾಹಕರಿಗೆ ಒದಗಿಸುತ್ತಿದ್ದು, ಅದರ ಕಾರ್ಯಾಚರಣೆಯನ್ನು ಬಲಪಡಿಸಲು ಈ ಕೆಳಗೆ ನಮೂದಿಸಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

1. ಸಹಾಯಕ ವ್ಯವಸ್ಥಾಪಕರು (ಎ.ಹೆಚ್./ಎ.ಐ.): ವೇತನಶ್ರೇಣಿ ರೂ.52650–97100–05 ಹುದ್ದೆಗಳು

**ವಿದ್ಯಾರ್ಹತೆ:–** ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಬಿ.ವಿ.ಎಸ್ಸಿ. ಮತ್ತು ಎ.ಹೆಚ್. ಪದವಿಯನ್ನು ಹೊಂದಿರತಕ್ಕದ್ದು.

| ಕ್ರ ಸಂ | ಹುದ್ದೆಯ ಹೆಸರು | ವೇತನಶ್ರೇಣಿ | ಒಟ್ಟು ಹುದ್ದೆ ಗಳು | ಪ್ರವರ್ಗ ಗಳ ವಿವರ | ಒಳ ಮೀಸಲಾತಿ | | | ಒಟ್ಟು ಹುದ್ದೆ |
|---|---|---|---|---|---|---|---|---|
| | | | | | ಮ | ಗ್ರಾ | ಅಂವಿ | |
| 1 | ಸಹಾಯಕ ವ್ಯವಸ್ಥಾಪಕರು (ಎ.ಹೆಚ್. & ಎ.ಐ) | 52650–97100 | **05** | ಪ.ಜಾ | 01 | 02 | 01 | 04 |
| | | | | ಪ.ಪಂ | 01 | – | – | 01 |
| | | | | ಒಟ್ಟು | 02 | 02 | 01 | 05 |

2. ತಾಂತ್ರಿಕಾಧಿಕಾರಿ (ಡಿಟಿ) ವೇತನಶ್ರೇಣಿ ರೂ.43100–83900 – 01 ಹುದ್ದೆ

**ವಿದ್ಯಾರ್ಹತೆ:–** ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಬಿ.ಟೆಕ್ (ಡಿ.ಟೆಕ್) /ಬಿ.ಎಸ್ಸಿ.(ಡಿಟಿ) ಪದವಿಯನ್ನು ಹೊಂದಿರತಕ್ಕದು.

| ಕ್ರ ಸಂ | ಹುದ್ದೆಯ ಹೆಸರು | ವೇತನಶ್ರೇಣಿ | ಒಟ್ಟು ಹುದ್ದೆ ಗಳು | ಪ್ರವರ್ಗ ಗಳ ವಿವರ | ಒಳ ಮೀಸಲಾತಿ | ಒಟ್ಟು ಹುದ್ದೆ |
|---|---|---|---|---|---|---|
| | | | | | ಅಂವಿ | |
| 1 | ತಾಂತ್ರಿಕಾಧಿಕಾರಿ (ಡಿಟಿ) | 43100–83900 | **01** | ಪ.ಜಾ | 01 | 01 |
| | | | | ಒಟ್ಟು | 01 | 01 |

**ಸಾಮಾನ್ಯ ಷರತ್ತುಗಳು:–** ಪದವಿ ಎಂದರೆ ಅಭ್ಯರ್ಥಿಯು 10+2 ರ ವಿಧ್ಯಾಭ್ಯಾಸದ ನಂತರ ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾಗಿರುವ ಯಾವುದೇ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ನಿಯತವಾಗಿ ಪಡೆದ ಕನಿಷ್ಟ ಐದು ವರ್ಷಗಳ ಅವಧಿಯ ಸಾಂಪ್ರದಾಯಿಕ ಪದವಿ (10+2+5). ಕನ್ನಡ ಭಾಷಾಜ್ಞಾನ (ಓದುವುದು ಮತ್ತು ಬರೆಯುವುದು) ಕಡ್ಡಾಯವಾಗಿರುತ್ತದೆ.

ಅಭ್ಯರ್ಥಿಗಳು ಅವಶ್ಯವಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ದಿನಾಂಕದೊಳಗೆ ನೇಮಕಾತಿ ಪ್ರಕಟಣೆಯ ಕೊನೆಯಲ್ಲಿ ನೀಡಲಾಗಿರುವ ನಮೂನೆಗಳಲ್ಲಿಯೇ ಪಡೆದು ಸಲ್ಲಿಸಬೇಕು. ಮೂಲವೇತನದೊಂದಿಗೆ ಒಕ್ಕೂಟದ ಸೇವಾ ನಿಯಮಗಳಲ್ಲಿ ಕಾಲಕಾಲಕ್ಕೆ ಲಭ್ಯವಿರುವ ತುಟ್ಟಿಭತ್ಯೆ, ಮನೆ ಬಾಡಿಗೆ ಭತ್ಯೆ ಮತ್ತು ಇತರ ಭತ್ಯೆಗಳನ್ನು ಪಾವತಿಸಲಾಗುವುದು. ಭವಿಷ್ಯನಿಧಿ / ಗ್ರಾಚ್ಯುಟಿ ಇತ್ಯಾದಿ ಶಾಸನಬದ್ಧ ಸೌಲಭ್ಯಗಳನ್ನು ನೀಡಲಾಗುವುದು. ಸಹಾಯಕ ವ್ಯವಸ್ಥಾಪಕರು (ಎ.ಹೆಚ್./ಎ.ಐ) ಹುದ್ದೆಗಳಿಗೆ ನೇಮಕಗೊಳ್ಳುವ ಅಭ್ಯರ್ಥಿಗಳು ಗ್ರಾಮೀಣ ಪ್ರದೇಶದಲ್ಲಿ ವ್ಯಾಪಕ ಪ್ರವಾಸವನ್ನು ಕೈಗೊಳ್ಳುವುದು ಕಡ್ಡಾಯವಾಗಿರುತ್ತದೆ.

**2. ವಯೋಮಿತಿ:–** ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಕನಿಷ್ಠ ವಯೋಮಿತಿ – 18 ವರ್ಷಗಳು ಮತ್ತು ಗರಿಷ್ಠ ವಯೋಮಿತಿ: 40 ವರ್ಷಗಳು. ಅಂಗವಿಕಲರಿಗೆ ಮತ್ತು ವಿಧವೆಯರಿಗೆ ವಯೋಮಿತಿಯಲ್ಲಿ ಗರಿಷ್ಠ 10 ವರ್ಷಗಳ ಸಡಿಲಿಕೆ ಇರುತ್ತದೆ. ವಯೋಮಿತಿ ಸಡಿಲಿಕೆಯ ವಿನಾಯಿತಿ / ರಿಯಾಯಿತಿ ಸೌಲಭ್ಯ ಪಡೆಯಲಿಚ್ಛಿಸುವವರು ಈ ಬಗ್ಗೆ ಅಗತ್ಯ ಪ್ರಮಾಣ ಪತ್ರ / ದಾಖಲೆ ಸಲ್ಲಿಸಬೇಕು. ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಭಾರತೀಯ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಅಷ್ಟು ವರ್ಷಗಳು. ಅಭ್ಯರ್ಥಿಯು ನ್ಯಾಷನಲ್ ಕೆಡೆಟ್‌ಕಾರ್ಪ್ಸ್‌ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರಿವೀಕ್ಷಕನಾಗಿಸೇವೆ ಸಲ್ಲಿಸಿದಷ್ಟು ವರ್ಷಗಳು.

**3. ಅರ್ಹತಾ ಷರತ್ತುಗಳು:**

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಅಭ್ಯರ್ಥಿಗಳು ಮಾನಸಿಕವಾಗಿ ಮತುದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಅತಂಕವನ್ನುಂಟು ಮಾಡುವ ಸಂಭವವಿರುವಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.

ಇ) ದೈಹಿಕವಾಗಿ ಅನರ್ಹರಾಗಿದ್ದರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಒಕ್ಕೂಟವು ಕಾಯ್ದಿರಿಸಿಕೊಂಡಿದೆ.

4. **ಆಯ್ಕೆ ವಿಧಾನ**: ಬ್ಯಾಕ್‌ಲಾಗ್ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಯಾವುದೇ ಶುಲ್ಕವನ್ನು ಪಾವತಿಸುವಂತಿಲ್ಲ. ಪರಿಶಿಷ್ಟ ಜಾತಿ – ಗ್ರಾಮೀಣ ಮತ್ತು ಪರಿಶಿಷ್ಟ ಜಾತಿ –ಇತರೆ ಬ್ಯಾಕ್‌ಲಾಗ್ ಹುದ್ದೆಗಳನ್ನು ಕರ್ನಾಟಕ ರಾಜ್ಯ ನಾಗರಿಕ ಸೇವೆಗಳು (ಪರಿಶಿಷ್ಟ ಜಾತಿ ಮತ್ತು (ಪರಿಶಿಷ್ಟ ಪಂಗಡಕ್ಕೆ ಸೇರಿದ ವ್ಯಕ್ತಿಗಳಿಗೆ ಮೀಸಲಿರಿಸಿದ ತುಂಬದೇ ಇರುವ ಸ್ಥಾನಗಳು) (ವಿಶೇಷ ನೇಮಕಾತಿ) ನಿಯಮಗಳು 2001 ಮತ್ತು ದಿನಾಂಕ 01–06–2002 ರ ಪ್ರಕಟಣೆಯಲ್ಲಿ ತಿದ್ದುಪಡಿಯಾದ ನಿಯಮಗಳ ಅವಕಾಶಗಳ ರೀತ್ಯಾ ಅರ್ಹತಾ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಗಳಿಸಿದ ಒಟ್ಟು ಅಂಕಗಳ ಶೇಕಡವಾರನ್ನು ಆಧರಿಸಿ 18 ವರ್ಷದಿಂದ 28 ವರ್ಷ ವಯೋಮಿತಿಯುಳ್ಳ ಅಭ್ಯರ್ಥಿಗಳ ಒಂದು ಜ್ಯೇಷ್ಠತಾ ಪಟ್ಟಿಯನ್ನು ಹಾಗೂ 29 ವರ್ಷದಿಂದ 40 ವರ್ಷ ವಯೋಮಿತಿಯುಳ್ಳ ಅಭ್ಯರ್ಥಿಗಳ ಇನ್ನೊಂದು ಜ್ಯೇಷ್ಠತಾ ಪಟ್ಟಿಯನ್ನು ಮಾಡಲಾಗುವುದು.29 ವರ್ಷದಿಂದ 40 ವರ್ಷ ವಯೋಮಿತಿಯುಳ್ಳ ಅಭ್ಯರ್ಥಿಗಳಜ್ಯೇಷ್ಠತಾ ಪಟ್ಟಿಯಲ್ಲಿರುವವರಿಗೆ ಮೊದಲ ಆದ್ಯತೆ ನೀಡಲಾಗುವುದು. ಅಭ್ಯರ್ಥಿಗಳು ಅರ್ಜಿಯಲ್ಲಿ ಅರ್ಹತಾ ಪರೀಕ್ಷೆಯಲ್ಲಿಗಳಿಸಿದ ಒಟ್ಟು ಶೇಕಡವಾರು ಅಂಕ / ಗ್ರೇಡ್ ಪಾಯಿಂಟ್‌ಗಳನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು.

5. **ಪ್ರಮುಖ ಸೂಚನೆಗಳು:–** ಜಾತಿ ಮೀಸಲಾತಿ ಪ್ರಮಾಣಪತ್ರಗಳು ಜಾತಿ ಮೀಸಲಾತಿಕೋರಬಯಸುವ – ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಕ್ಕೆ ಸೇರಿದ ಬಗ್ಗೆ ನಮೂನೆ 'ಡಿ' ಯಲ್ಲಿಜಾತಿ ಪ್ರಮಾಣ ಪತ್ರ ಸಲ್ಲಿಸುವುದು. ಗ್ರಾಮೀಣ ಅಭ್ಯರ್ಥಿ: ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ 1 ರಿಂದ 10 ನೇ ತರಗತಿಯವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಗ್ರಾಮೀಣ ಮೀಸಲಾತಿಯನ್ನು ಪಡೆಯಲು ಅರ್ಹರು. ಈ ಪ್ರಮಾಣಪತ್ರಗಳು ಅರ್ಜಿ ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು. ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ–2 ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣಪತ್ರವನ್ನು ಸಂಬಂಧಿತ ತಹಸೀಲ್ದಾರರಿಂದ ಪಡೆದು ಸಲ್ಲಿಸಬೇಕು. ಗ್ರಾಮೀಣ ಮೀಸಲಾತಿ ಪ್ರಮಾಣಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ. ನಮೂನೆ–2 ರ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಅದಕ್ಕೆ ಸಂಬಂಧಿತಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಪಡೆದಿರತಕ್ಕದ್ದು

ii.ಕಡ್ಡಾಯವಾಗಿ ಹಾಜರುಪಡಿಸಬೇಕಾದ ಪ್ರಮಾಣಪತ್ರಗಳು ವಿದ್ಯಾರ್ಹತೆಗೆ ಸಂಬಂಧಿಸದಎಲ್ಲಾ ವರ್ಷಗಳ/ ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಮತ್ತು ಪ್ರಮಾಣಪತ್ರ ಹಾಗೂ ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣಪತ್ರ ಅಥವಾ ವರ್ಗಾವಣೆ ಪ್ರಮಾಣಪತ್ರ ಅಥವಾ ಜನ್ಮ ದಿನಾಂಕವನ್ನು ತೋರಿಸುವ ಸಂಚಿತದಾಖಲೆಯ ಉದ್ಧೃತ ಭಾಗ (Extract of cumulative record) ಕಡ್ಡಾಯವಾಗಿ ಸಲ್ಲಿಸತಕ್ಕದ್ದು. ಇಲ್ಲದಿದ್ದಲ್ಲಿ ಅರ್ಜಿಯನ್ನು ಪರಿಗಣಿಸಲಾಗುದಿಲ್ಲ. ವಿವಿಧ ಮೀಸಲಾತಿಗಳನ್ನು ಕೋರಿದಲ್ಲಿ ಮೀಸಲಾತಿ ಪ್ರಮಾಣಪತ್ರಗಳನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು. ಮೀಸಲಾತಿಗೆ ಸಂಬಂಧಿಸಿದಂತೆ ಸಲ್ಲಿಸಬೇಕಾದ ಪ್ರಮಾಣಪತ್ರಗಳನ್ನು ಅಭ್ಯರ್ಥಿಗಳು ಸಲ್ಲಿಸದಿದ್ದಲ್ಲಿ ಅಂತಹವರಿಗೆ ಮೀಸಲಾತಿ ಸೌಲಭ್ಯವನ್ನು ನೀಡಲಾಗುವುದಿಲ್ಲ.

iii. **ಪರೀಕ್ಷಾರ್ಥ ಅವಧಿ:** ಆಯ್ಕೆಗೊಂಡ ಅಭ್ಯರ್ಥಿಗಳನ್ನು ಪ್ರಾರಂಭದಲ್ಲಿ ಐದು ವರ್ಷಗಳ ಪರೀಕ್ಷಾರ್ಥ ಅವಧಿಗೆ ನೇಮಕಾತಿ ಮಾಡಲಾಗುವುದು. ಅವಶ್ಯವಿದ್ದಲ್ಲಿ ಪರೀಕ್ಷಾರ್ಥ ಅವಧಿಯನ್ನು ವಿಸ್ತರಿಸಲಾಗುವುದು. ಪರೀಕ್ಷಾರ್ಥ ಅವಧಿಯಲ್ಲಿ ಅಭ್ಯರ್ಥಿಗಳ ಸೇವೆ ತೃಪ್ತಿಕರವಾಗಿದ್ದಲ್ಲಿ ಮಾತ್ರ ಸೇವೆಯನ್ನು ಖಾಯಂಗೊಳಿಸಲಾಗುವುದು.

**iv.ದುರ್ನಡತೆ:** ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಹೊಂದಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾಕೊಠಡಿಯಲ್ಲಿ ದುರ್ವರ್ತಿಸುತ್ತಿರುವನೆಂಬ ಬಗ್ಗೆ ತಪ್ಪಿತಸ್ಥನೆಂದು ಕಂಡುಬಂದಲ್ಲಿ ಹಾಗೂ ಒಕ್ಕೂಟದಿದಿಂದ ನೀಡಲಾದಯಾವುದೇ ಸೂಚನೆಗಳನ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು

ನೇಮಕಾತಿಯ ಸಂಬಂಧದಲ್ಲಿಯಾವುದೇ ಇತರ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ ಒಕ್ಕೂಟವು ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.

**v. ಅರ್ಜಿ ಸಲ್ಲಿಸುವ ವಿಧಾನ** : www.mymul.coop ನಲ್ಲಿ ನೀಡಿರುವ ನಿಗದಿತ ಅರ್ಜಿ ನಮೂನೆಯಲ್ಲಿ ಕನ್ನಡ ಅಥವಾ ಆಂಗ್ಲ ಭಾಷೆಯಲ್ಲಿ ಸ್ಪಷ್ಟವಾಗಿ ಬರೆದು ಅಥವಾ ಬೆರಳಚ್ಚು / ಕಂಪ್ಯೂಟರ್ ಮುದ್ರಣ ಮಾಡಿಸಿ ಅಗತ್ಯವಿರುವ ಎಲ್ಲಾ ದಾಖಲೆಗಳ ಪ್ರತಿಗಳನ್ನು ಸ್ವತ: ದೃಢೀಕರಿಸಿ (self attested) ಅರ್ಜಿಯೊಂದಿಗೆ ಕಡ್ಡಾಯವಾಗಿ ಲಗತ್ತಿಸಿ "ವ್ಯವಸ್ಥಾಪಕ ನಿರ್ದೇಶಕರು, ಮೈಸೂರು ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಒಕ್ಕೂಟ ನಿಯಮಿತ, ಮಲೆಮಹದೇಶ್ವರ ರಸ್ತೆ, ಪ್ರಧಾನ ಡೇರಿ ಆವರಣ, ಸಿದ್ದಾರ್ಥನಗರ, ಮೈಸೂರು – 570 011" ವಿಳಾಸಕ್ಕೆ ದಿನಾಂಕ 09.10.2019 ರಂದು ಸಂಜೆ 5.30 ಘಂಟೆಯೊಳಗೆ ಅಥವಾ ಅದಕ್ಕೂ ಮುಂಚಿತವಾಗಿ ತಲುಪುವಂತೆ ಅಂಚೆ : ಕೊರಿಯರ್ ಮೂಲಕ ಅಥವಾ ಖುದ್ದಾಗಿ ಕಳುಹಿಸತಕ್ಕದ್ದು. ಲಕೋಟೆಯ ಮೇಲೆ ಅರ್ಜಿ ಸಲ್ಲಿಸುವ ಹುದ್ದೆಯ ಹೆಸರನ್ನು ನಮೂದಿಸುವುದು. ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ : 09.09.2019. ಸಂಪೂರ್ಣ ಮಾಹಿತಿ ಒಳಗೊಂಡಿರದ ಹಾಗೂ ಅಗತ್ಯ ಪ್ರಮಾಣ ಪತ್ರಗಳು/ ಭಾವಚಿತ್ರ/ ಸಹಿ ಮಾಡದೇ ಇರುವ ಅರ್ಜಿಗಳನ್ನು ಮತ್ತು ಕೊನೆಯ ದಿನಾಂಕ 09.10.2019 ರಂದು ಸಂಜೆ 5.30 ಘಂಟೆಯ ನಂತರ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ : 09.09.2019.
ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : 09.10.2019

**ಸಹಿ**
**ವ್ಯವಸ್ಥಾಪಕ ನಿರ್ದೇಶಕರು**
**ಮೈಸೂರು ಜಿಲ್ಲಾ ಹಾಲು ಒಕ್ಕೂಟ ನಿ., ಮೈಸೂರು**

# ಅರ್ಜಿ ನಮೂನೆ

| | | |
|---|---|---|
| 1. | ಹುದ್ದೆಯ ಹೆಸರು | |
| 2. | ಅರ್ಜಿದಾರರ ಪೂರ್ಣ ಹೆಸರು | |
| 3. | ತಂದೆಯ / ಗಂಡನ ಹೆಸರು | |

| 4. ಲಿಂಗ | 6. ಹುಟ್ಟಿದ ಸ್ಥಳ | 8. ಹುಟ್ಟಿದ ದಿನಾಂಕ | | |
|---|---|---|---|---|
| | | ತಾರೀಖು | ತಿ0ಗಳು | ವರ್ಷ |
| | | | | |

| 5. ರಾಷ್ಟ್ರೀಯತೆ | 7. ಜಾತಿ / ಉಪ ಜಾತಿ | 9. ವಯಸ್ಸು (09.10.2019 ಕ್ಕೆ ಇದ್ದಂತೆ) | |
|---|---|---|---|
| | | ವರ್ಷಗಳು | ತಿ0ಗಳು |
| | | | |

(8 ಮತ್ತು 9 ಕ್ಕೆ ಸಂಬಂಧಿಸಿದಂತೆ ಎಸ್.ಎಸ್.ಎಲ್.ಸಿ. / ತತ್ಸಮಾನ ಪರೀಕ್ಷೆ, ವರ್ಗಾವಣೆ ಪ್ರಮಾಣ ಪತ್ರ ಅಥವಾ ಸಂಚಿತ ದಾಖಲೆಯ ಉದ್ಧೃತ ಭಾಗದ ದೃಢೀಕೃತ ಪ್ರತಿಯನ್ನು ಕಡ್ಡಾಯವಾಗಿ ಲಗತ್ತಿಸಬೇಕು)

| 10. ಕೋರಿರುವ ಮೀಸಲಾತಿ ವರ್ಗ | ಒಳ ಮೀಸಲಾತಿ | | |
|---|---|---|---|
| ಪ.ಜಾ. | ಮಹಿಳೆ | ಗ್ರಾ.ಅ. | ಅಂ.ವಿ |
| ಪ.ಪಂ. | | | |

ಸರ್ಕಾರವು ಇತ್ತೀಚೆಗೆ ನಿಗಧಿಪಡಿಸಿರುವ ನಮೂನೆಯಲ್ಲಿ ಸಕ್ಷಮ ಅಧಿಕಾರಿಗಳಿಂದ ಪಡೆದ ಚಾಲ್ತಿಯಲ್ಲಿರುವ ಜಾತಿ / ಮೀಸಲಾತಿ ಪ್ರಮಾಣ ಪತ್ರದ ದೃಢೀಕೃತ ಪ್ರತಿಗಳನ್ನು ಲಗತ್ತಿಸಬೇಕು.

11. **ಶೈಕ್ಷಣಿಕ ಮತ್ತು ವೃತ್ತಿಪರ ವಿದ್ಯಾರ್ಹತೆ** ಹುದ್ದೆಗೆ ನಿಗಧಿಪಡಿಸಿರುವ ವಿದ್ಯಾರ್ಹತೆಗೆ ಸಂಬಂಧಿಸಿದಂತೆ ಸೆಮಿಸ್ಟರ್ ಪದ್ಧತಿಯಲ್ಲಿ ಎಲ್ಲಾ ಸೆಮಿಸ್ಟರ್‌ಗಳ ಅಥವಾ ನಾನ್‌ಸೆಮಿಸ್ಟರ್ ಪದ್ಧತಿಯಾದಲ್ಲಿ ಎಲ್ಲಾ ವಾರ್ಷಿಕ ಪರೀಕ್ಷೆಗಳ ಅಂಕಗಳನ್ನು ನಮೂದಿಸಬೇಕು. OGPA/CGPA/Grade ಆದಲ್ಲಿ ಸಮಾನ ಶೇಕಡವಾರು (%) ನಮೂದಿಸಬೇಕು

| ಕ್ರ. ಸ0. | ವಿಶ್ವವಿದ್ಯಾನಿಲಯ / ಮಂಡಳಿ | ಉತ್ತೀರ್ಣರಾದ ತಿಂಗಳು ಮತ್ತು ವರ್ಷ | ಪದವಿ ಸರ್ಟಿಫಿಕೇಟ್ | ಒಟ್ಟು ಅಂಕಗಳು | ಗಳಿಸಿದ ಅಂಕಗಳು | ಶೇಕಡಾವಾರು ಅಂಕಗಳು |
|---|---|---|---|---|---|---|
| 01 | 1ನೇ ವರ್ಷ / ಸೆಮಿಸ್ಟರ್ | | | | | |
| 02 | 2ನೇ ವರ್ಷ / ಸೆಮಿಸ್ಟರ್ | | | | | |
| 03 | 3ನೇ ವರ್ಷ / ಸೆಮಿಸ್ಟರ್ | | | | | |
| 04 | 4ನೇ ವರ್ಷ / ಸೆಮಿಸ್ಟರ್ | | | | | |
| 05 | 5ನೇ ವರ್ಷ / ಸೆಮಿಸ್ಟರ್ | | | | | |
| 06 | 6ನೇ ವರ್ಷ / ಸೆಮಿಸ್ಟರ್ | | | | | |
| 07 | | | | | | |
| 08 | | | | | | |
| 09 | | | | | | |
| 10 | | | | | | |

ವಿದ್ಯಾರ್ಹತೆಗೆ ಸಂಬಂಧಿಸಿದಂತೆ ದೃಢೀಕರಿಸಿದ ಪ್ರಮಾಣ ಪತ್ರ ಮತ್ತು ಎಲ್ಲಾ ಸೆಮಿಸ್ಟರ್ / ವರ್ಷಗಳ ಅಂಕ ಪಟ್ಟಿಗಳ ಪ್ರತಿಗಳನ್ನು ಕಡ್ಡಾಯವಾಗಿ ಲಗತ್ತಿಸಬೇಕು.

| | |
|---|---|
| 12. ಅಂಚೆ ವಿಳಾಸ:– | ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರ ಅಂಟಿಸಿ |
| 13. ದೂರವಾಣಿ ಸಂಖ್ಯೆ **STD CODE** ಜೊತೆ | 14. ಮೊಬೈಲ್ ನಂ. |
| | |
| 15. ಫ್ಯಾಕ್ಸ್ ನಂ. | 16. **Email ID:** |
| | |
| 17. ಅರ್ಜಿದಾರರು ನೀಡುವ ಇತರೆ ಯಾವುದೇ ಮಾಹಿತಿಗಳು (ಇದ್ದಲ್ಲಿ) | |

(ಅರ್ಜಿ ನಮೂನೆಯಲ್ಲಿರುವ ಕಲಂಗಳಲ್ಲಿ ಅರ್ಜಿದಾರರು ಅವಶ್ಯ ಮಾಹಿತಿಯನ್ನು ನಮೂದಿಸಲು ಅವಶ್ಯವಿರುವಷ್ಟು ಸ್ಥಳಾವಕಾಶ ಕಲ್ಪಿಸಿಕೊಳ್ಳಬಹುದು.)

**ಘೋಷಣೆ**

ಈ ಅರ್ಜಿಯಲ್ಲಿ ನೀಡಿದ ಎಲ್ಲಾ ಮಾಹಿತಿಗಳು ನಿಜ, ಪರಿಪೂರ್ಣ ಮತ್ತು ಸರಿಯಾಗಿದೆಯೆಂದು ಘೋಷಿಸುತ್ತೇನೆ. ಯಾವುದೇ ಮಾಹಿತಿ ತಪ್ಪು ಅಥವಾ ಸರಿಯಲ್ಲ ಎಂದು ಕಂಡುಬಂದಲ್ಲಿ ಅಥವಾ ಯಾವುದೇ ಹಂತದಲ್ಲಿ ಈ ಬಗ್ಗೆ ಯಾವುದೇ ವಾಸ್ತವಾಂಶಗಳನ್ನು ಮುಚ್ಚಿಡಲು ಉದ್ದೇಶಪೂರ್ವಕವಾಗಿ ಪ್ರಯತ್ನಿಸಿದ್ದೇನೆಂದು / ಸಲ್ಲಿಸಿದ ಮಾಹಿತಿ ಸುಳ್ಳು ಎಂದು ಕಂಡುಬಂದಲ್ಲಿ ನನ್ನ ಅಭ್ಯರ್ಥಿತನವನ್ನು ಅನರ್ಹಗೊಳಿಸಬಹುದು ಮತ್ತು ಒಂದು ವೇಳೆ ಸೇವೆಗೆ ಸೇರ್ಪಡೆಗೊಂಡಿದ್ದಲ್ಲಿ ನನ್ನ ಸೇವೆಯನ್ನು ಮುಕ್ತಾಯಗೊಳಿಸಬಹುದು ಎಂದು ತಿಳಿದಿರುತ್ತೇನೆ.

ಅರ್ಜಿದಾರನ ಸಹಿ.

ಸ್ಥಳ :–
ದಿನಾಂಕ :–